# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1203

2) ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)

3) ಉತ್ತರಿಸುವ ದಿನಾಂಕ : 20.12.2018

4) ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

| | ಪ್ರಶ್ನೆ | ಉತ್ತರ |
|---|---|---|
| (ಅ) | ಕೊಡಗು ಜಿಲ್ಲೆಯಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರಕೃತಿ ವಿಕೋಪದ ಹಿನ್ನೆಲೆಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ನಿಧಿಯಿಂದ ಪ್ರತಿ ಶಾಸಕರಿಗೆ ಮೀಸಲಾದ ಅನುದಾನದಲ್ಲಿ ತಲಾ 25 ಲಕ್ಷ ರೂಪಾಯಿಗಳನ್ನು ಕೊಡಗು ಪರಿಹಾರ ನಿಧಿಗೆ ವರ್ಗಾಯಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; | - ಹೌದು - |
| (ಆ) | ಇದ್ದಲ್ಲಿ, ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ; | ಈ ಬಗ್ಗೆ ಈಗಾಗಲೇ ಅಧಿಕೃತ ಜ್ಞಾಪನ ಸಂಖ್ಯೆ: ಯೋಇ 105 ಯೋವಿವಿ 2018 ದಿನಾಂಕ:12.10.2018 ರಲ್ಲಿ ಕೊಡಗು ಜಿಲ್ಲೆಯ ಪುನರ್ ನಿರ್ಮಾಣಕ್ಕಾಗಿ ಪ್ರಕೃತಿ ವಿಕೋಪಕ್ಕೆ ಒಳಪಡದ ಇತರ ಕ್ಷೇತ್ರಗಳ ಶಾಸಕರೂ ಸಹ ಕೊಡಗು ಜಿಲ್ಲೆಯಲ್ಲಿನ ಪರಿಹಾರ ಕಾಮಗಾರಿಗಳಿಗಾಗಿ ಗರಿಷ್ಠ ರೂ.25.00 ಲಕ್ಷಗಳನ್ನು 2018-19ನೇ ಸಾಲಿನಲ್ಲಿ ಮಾತ್ರ ಕರ್ನಾಟಕ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಶಿಫಾರಸ್ಸು ಮಾಡಲು ಅವಕಾಶ ಕಲ್ಪಿಸಲಾಗಿದೆ. |
| (ಇ) | ಯಾವ ಕಾಲಮಿತಿಯೊಳಗೆ ಸದರಿ ಅನುದಾನ ವರ್ಗಾಯಿಸಿ ಕೊಡಗು ಜಿಲ್ಲೆಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು? | 2018-19ನೇ ಸಾಲಿನ ಮಾರ್ಚ್ ಅಂತ್ಯದೊಳಗೆ ಸದರಿ ಅನುದಾನವನ್ನು ಆಯಾ ಶಾಸಕರು ಅಪ್ಪಣೆ ನೀಡಿದ್ದಲ್ಲಿ, ಕೊಡಗು ಜಿಲ್ಲಾಧಿಕಾರಿಗಳಿಗೆ ಅನುದಾನ ವರ್ಗಾಯಿಸಿ ಕಾಮಗಾರಿ ಕೈಗೊಳ್ಳಬಹುದಾಗಿದೆ. |

ಸಂಖ್ಯೆ:ಯೋಇ 149 ಯೋವಿವಿ 2018

(ಹೆಚ್.ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ.